## ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ:- ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದ 2021-22ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು..

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 423 ಬಿಎಂಎಸ್ 2021, ದಿನಾಂಕ:10.01.2022
2. ಪ್ರಸ್ತಾವನೆ ಸಂಖ್ಯೆ: ಕ.ವಿ.ಲಿ.ಅ.ನಿ/ಸಿಆರ್-39/131/2021-22, ದಿನಾಂಕ:28.01.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮದಿಂದ 2021-22ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಬಸವ ಬೆಳಗು ಯೋಜನೆ, ವಿದೇಶ ವಿದ್ಯಾ ವಿಕಾಸ, ಪರಿಪೂರ್ಣದೆಡೆಗೆ, ಕಾಯಕಕಿರಣ, ಸ್ವಸಹಾಯ ಸಂಘಗಳಿಗೆ ಉತ್ತೇಜನ, ಜೀವಜಲ, ಶರಣಸೇನೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪ್ರಸ್ತಾವನೆಯಲ್ಲಿ ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮಕ್ಕೆ 2020-21ನೇ ಸಾಲಿನಲ್ಲಿ ರೂ. 100.00 ಕೋಟಿಗಳ ಅನುದಾನವನ್ನು ಸಾದಿಲ್ವಾರು ನಿಧಿ ಲೆಕ್ಕಶೀರ್ಷಿಕೆ:8000-00-224-0-00 Miscellaneous General Services ರಡಿಯಲ್ಲಿ ಬಿಡುಗಡೆ ಮಾಡಿ ಆದೇಶಿಸಲಾಗಿದ್ದು, ಅದರಂತೆ ದಿನಾಂಕ:14.07.2021ರಂದು ನಡೆದ 2ನೇ ನಿಗಮ ಮಂಡಳಿಯ ಸಭೆಯ ತೀರ್ಮಾನದಂತೆ ಯೋಜನೆಗಳ ಅನುಮೋದನೆ ಕೋರಲಾಗಿತ್ತು. ಅದರಂತೆ ನಿಗಮದ ವತಿಯಿಂದ ಬಸವ ಬೆಳಗು ಯೋಜನೆ, ವಿದೇಶ ವಿದ್ಯಾ ವಿಕಾಸ, ಪರಿಪೂರ್ಣದೆಡೆಗೆ, ಕಾಯಕಕಿರಣ, ಸ್ವಸಹಾಯ ಸಂಘಗಳಿಗೆ ಉತ್ತೇಜನ, ಜೀವಜಲ, ಶರಣಸೇನೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ. ಮುಂದುವರೆದು, ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯ ಆರ್ಥಿಕ ಮತ್ತು ಭೌತಿಕ ಗುರಿಯನ್ನು ಸಿದ್ಧಪಡಿಸಲಾಗಿದ್ದು, ಕರ್ನಾಟಕ ವೀರಶಯವ ಲಿಂಗಾಯಿತ ಅಭಿವೃದ್ಧಿ ನಿಗಮ ನಿಯಮಿತದ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನುಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದಆದೇಶಸಂಖ್ಯೆ:ಬಿಸಿಡಬ್ಲ್ಯೂ 423 ಬಿಎಂಎಸ್ 2021,**
**ಬೆಂಗಳೂರು, ದಿನಾಂಕ: 09-03-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿಗೆ ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಈ ಕೆಳಕಂಡ 07 ಕಾರ್ಯಕ್ರಮಗಳನ್ನು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

| ಕ್ರ ಸಂ | ಯೋಜನೆಯ ಹೆಸರು |
|---|---|
| 1. | ಬಸವ ಬೆಳಗು ಯೋಜನೆ |
| 2. | ವಿದೇಶ ವಿದ್ಯಾ ವಿಕಾಸ |
| 3. | ಪರಿಪೂರ್ಣದೆಡೆಗೆ |
| 4. | ಕಾಯಕ ಕಿರಣ |
| 5. | ಸ್ವಸಹಾಯ ಸಂಘಗಳಿಗೆ ಉತ್ತೇಜನ |
| 6. | ಜೀವಜಲ |
| 7. | ಶರಣಸೇನೆ. |

**ಷರತ್ತುಗಳು:-**

1. ಸದರಿ ಯೋಜನೆಗಳಿಗೆ ಕರ್ನಾಟಕ ಸರ್ಕಾರದ ಸುವಿಧಾ ಪೋರ್ಟಲ್ ಮುಖಾಂತರ ಆನ್‌ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಪಡೆಯತಕ್ಕದ್ದು, ಅರ್ಜಿಗಳನ್ನು ಅಹ್ವಾನಿಸಲು ನಿಗಮವು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಕನಿಷ್ಟ 45 ದಿನಗಳ ಕಾಲಾವಕಾಶ ನೀಡುವುದು.

09/03/2022

2. ಸದರಿ ಯೋಜನೆಗಳನ್ನು ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮವು ಕೂಡಲೇ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು. ಸಕ್ಷಮ ಪ್ರಾಧಿಕಾರದಿಂದ ಸೆಕ್ಷನ್ 07 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚನೆ ಹೊರಡಿಸಿದ ನಂತರ ನಿಯಮಾನುಸಾರ ಕಡ್ಡಾಯವಾಗಿ ಫಲಾನುಭವಿಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಅನುದಾನ ಸಂಧಾಯವಾಗಬೇಕು.
3. ಸದರಿ ಯೋಜನೆಗಳ ಮಾರ್ಗಸೂಚಿಯಲ್ಲಿ ಸರ್ಕಾರವು ಏನೇ ಬದಲಾವಣೆ ಮಾಡಿದ್ದಲ್ಲಿ ಆ ದಿನದಿಂದಲೇ ಬದಲಾವಣೆ ಆಗುವ ಮಾರ್ಗಸೂಚಿಗಳ ಅನುಸಾರ ಯೋಜನೆಗಳನ್ನು ಅನುಷ್ಠಾನ ಮಾಡುವುದು.
4. ನಿಗಮದ ಹಂತದಲ್ಲಿ ಯಾವುದೇ ಯೋಜನೆಯನ್ನು ಬದಲಾವಣೆ ಮಾಡಬೇಕಾದಲ್ಲಿ ಸರ್ಕಾರದ ಪೂರ್ವಾನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು.
5. ನಿಗಮಕ್ಕೆ ಒದಗಿಸಲಾಗಿರುವ ಅನುದಾನದ ಮಿತಿಯಲ್ಲಿಯೇ ಯೋಜನೆಗಳನ್ನು ಅನುಷ್ಠಾನ ಮಾಡುವುದು.
6. ಯೋಜನಾವಾರು ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಆಯ್ಕೆ ಪ್ರಕ್ರಿಯೆಯ ವಿವರಗಳು ಮತ್ತು ನಡವಳಿಗಳು ಹಾಗೂ ಆರ್ಥಿಕ ಮತ್ತು ಭೌತಿಕ ಪ್ರಗತಿಯ ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿಯನ್ನು ನಿಗಮದ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಕಡ್ಡಾಯವಾಗಿ ವ್ಯವಸ್ಥಾಪಕ ನಿರ್ದೇಶಕರು ಅಳವಡಿಸತಕ್ಕದ್ದು.
7. ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮವು ಈಗ ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಯಲ್ಲಿ ಅನುಮೋದಿಸಿರುವ ಬಸವ ಬೆಳಗು ಯೋಜನೆ (ಅರಿವು ಶೈಕ್ಷಣಿಕ ಸಾಲ ಯೋಜನೆ), ಶರಣ ಸೇನೆ (ಸೈನಿಕ ತರಬೇತಿ), ಪರಿಪೂರ್ಣದೆಡೆಗೆ (ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ) ವಿದೇಶ ವಿದ್ಯಾ ವಿಕಾಸ (ವಿದೇಶಿ ವಿಶ್ವ ವಿದ್ಯಾಲಯದಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ/ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ), ಈ ನಾಲ್ಕು ಯೋಜನೆಗಳಿಗೆ ಅನ್ವಯಿಸುವಂತೆ ಆಯುಕ್ತಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ/ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಹಂತದಲ್ಲಿ ಅನುಷ್ಠಾನವಾಗುತ್ತಿದ್ದು, ಫಲಾನುಭವಿಗಳ ಪುನಾರ್ವತನೆಯಾಗದಿರುವ ಬಗ್ಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಇವರು ಸಂಪೂರ್ಣ ಹೊಣೆಯನ್ನು ತೆಗೆದುಕೊಳ್ಳುವುದು. ಒಂದು ವೇಳೆ ಫಲಾನುಭವಿಗಳು ಪುನಾವರ್ತನೆಯಾದಲ್ಲಿ ವ್ಯವಸ್ಥಾಪಕ ನಿರ್ದೇಶಕರೇ ನೇರ ಹೊಣೆಗಾರರಾಗಿರುತ್ತಾರೆ.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

ShEenparveen 09/03/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಎಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

3...

3. ವ್ಯವಸ್ಥಾಪಕ, ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯಿತ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ, ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

****